# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 552 (752) |
| ಸದಸ್ಯರ ಹೆಸರು | : | ಶ್ರೀ ಅ. ದೇವೇಗೌಡ (ಪದವೀಧರರ ಕ್ಷೇತ್ರದಿಂದ ಚುನಾಯಿತರಾದವರು) |
| ಉತ್ತರಿಸುವ ದಿನಾಂಕ | : | 26.12.2022 |
| ಉತ್ತರಿಸುವ ಸಚಿವರು | : | ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರು |

| ಕ್ರ.ಸಂ | ಪ್ರಶ್ನೆ | ಉತ್ತರಗಳು |
|---|---|---|
| ಅ) | ರಾಜ್ಯದ ಆಯುಷ್ ಇಲಾಖೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಆಯುಷ್ ತಜ್ಞ ವೈದ್ಯರುಗಳಿಗೆ ವೃಂದ ಮತ್ತು ನೇಮಕಾತಿ ನಿಯಮಗಳನ್ನು ರೂಪಿಸಲಾಗಿದೆಯೇ; ವೃಂದ ಮತ್ತು ನೇಮಕಾತಿ ನಿಯಮಗಳನ್ನು ರೂಪಿಸದೇ ಇದ್ದಲ್ಲಿ ಇಲಾಖೆಯು ನಿಯಮಗಳನ್ನು ರೂಪಿಸಲು ಇನ್ನೆಷ್ಟು ಸಮಯಾವಕಾಶ ಬೇಕಾಗುತ್ತದೆ; | ಕೇಂದ್ರ ಪುರಸ್ಕೃತ ಯೋಜನೆ ರಾಷ್ಟ್ರೀಯ ಆಯುಷ್ ಅಭಿಯಾನ ಯೋಜನೆಯಡಿಯಲ್ಲಿ ತಜ್ಞ ವೈದ್ಯರುಗಳ ಹುದ್ದೆಯು ಸಂಪೂರ್ಣವಾಗಿ ತಾತ್ಕಾಲಿಕ ಹುದ್ದೆಯಾಗಿರುತ್ತದೆ. ಸದರಿ ಯೋಜನೆಯು ಅಸ್ತಿತ್ವದಲ್ಲಿರುವವರೆಗೂ ಮಾತ್ರ ಈ ಹುದ್ದೆಗಳು ಚಾಲ್ತಿಯಲಿರುತ್ತದೆ. ಆದ್ದರಿಂದ ತಜ್ಞ ವೈದ್ಯರುಗಳಿಗೆ ಸಂಬಂಧಿಸಿದಂತೆ ವೃಂದ ಮತ್ತು ನೇಮಕಾತಿ ನಿಯಮಗಳನ್ನು ರೂಪಿಸುವ ಅವಶ್ಯಕತೆ ಇರುವುದಿಲ್ಲ. |
| ಆ) | ಆಯುಷ್ ಇಲಾಖೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ವಿವಿಧ ದರ್ಜೆಯ ವೈದ್ಯಾಧಿಕಾರಿಗಳ ಮತ್ತು ತಜ್ಞ ವೈದ್ಯರುಗಳ ಕರ್ತವ್ಯ ಕಾರ್ಯವ್ಯಾಪ್ತಿ ಹಾಗೂ ಜವಾಬ್ದಾರಿಗಳೇನು; (ಮಾಹಿತಿ ಒದಗಿಸುವುದು) | ವಿವಿಧ ದರ್ಜೆಯ ವೈದ್ಯಾಧಿಕಾರಿಗಳ ಮತ್ತು ತಜ್ಞ ವೈದ್ಯರುಗಳ ಕರ್ತವ್ಯ ಕಾರ್ಯವ್ಯಾಪ್ತಿ ಹಾಗೂ ಜವಾಬ್ದಾರಿಗಳು ಈ ಕೆಳಕಂಡಂತಿವೆ.<br>• ಆಸ್ಪತ್ರೆ/ಚಿಕಿತ್ಸಾಲಯಗಳಿಗೆ ಬರುವ ಒಳ ಹಾಗೂ ಹೊರ ರೋಗಿಗಳಿಗೆ ಸೂಕ್ತ ಚಿಕಿತ್ಸೆ ಒದಗಿಸುವುದು ಹಾಗೂ ಉಚಿತ ಔಷಧಿ ವಿತರಣೆ.<br>• ವೈದ್ಯಾಧಿಕಾರಿಗಳು ಆಸ್ಪತ್ರೆ/ಚಿಕಿತ್ಸಾಲಯದ ಮುಖ್ಯಸ್ಥರಾಗಿ ಆಸ್ಪತ್ರೆ/ಚಿಕಿತ್ಸಾಲಯದ ಹಾಗೂ ಸಿಬ್ಬಂದಿಗಳ ಮೇಲ್ವಿಚಾರಣೆ.<br>• ಇಲಾಖೆಯಿಂದ ನಿಗದಿಯಾದ ಎಸ್. ಸಿ.ಎಸ್.ಪಿ/ಟಿ.ಎಸ್.ಪಿ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸುವುದು.<br>• ಐಇಸಿ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸುವುದು.<br>• ರಾಷ್ಟ್ರೀಯ ಆಯುಷ್ ಅಭಿಯಾನದಡಿ ವಿವಿಧ ಯೋಜನೆಗಳನ್ನು ಅನುಷ್ಠಾನಗೊಳಿಸುವುದು.<br>• ಆಕುಕ ಇಲಾಖೆಯ ಸಹಯೋಗದೊಂದಿಗೆ ರಾಷ್ಟ್ರೀಯ ಆರೋಗ್ಯ ಕಾರ್ಯಕ್ರಮಗಳಿಗೆ ಭಾಗಿಯಾಗುವುದು.<br>• ಆಯುಷ್ ಪದ್ಧತಿಯ ಬಗ್ಗೆ ಸಾರ್ವಜನಿಕರಿಗೆ ಜಾಗೃತಿ ಮೂಡಿಸುವುದು.<br>• ಆರೋಗ್ಯ ಕ್ಷೇಮಕೇಂದ್ರಗಳನ್ನಾಗಿ ಗುರುತಿಸಲಾದ ಚಿಕಿತ್ಸಾಲಯಗಳಲ್ಲಿ ಸಾರ್ವಜನಿಕರಿಗೆ ಯೋಗ ತರಬೇತುದಾರರ ಮೂಲಕ ಯೋಗ ತರಬೇತಿಯನ್ನು ಒದಗಿಸುವುದು. |

| | | |
|---|---|---|
| | | • ಅಂತರಾಷ್ಟ್ರೀಯ ಯೋಗ ದಿನಾಚರಣೆ ಹಾಗೂ ಇನ್ನಿತರೆ ಆಯುಷ್ ದಿನಾಚರಣೆಗಳನ್ನು ಆಚರಿಸುವುದು.<br>• ಉಚಿತ ಆರೋಗ್ಯ ತಪಾಸಣೆ, ಆಯುಷ್ ಸೇವಾಗ್ರಾಮ, ಮನೆಮದ್ದು ಹಾಗೂ ಇನ್ನಿತರೆ ಕಾರ್ಯಕ್ರಮಗಳಲ್ಲಿ ಭಾಗವಹಿಸುವುದು.<br>• ಆಸ್ಪತ್ರೆ/ಚಿಕಿತ್ಸಾಲಯದ ಹೊರರೋಗಿ/ಒಳರೋಗಿ ಮಾಹಿತಿ, ಆರ್ಥಿಕ ಖರ್ಚು - ವೆಚ್ಚದ ಮಾಹಿತಿ ಇನ್ನಿತರೆ ಅವಶ್ಯಕ ಮಾಹಿತಿಯನ್ನು ಮಾಹೆವಾರು ಒದಗಿಸುವುದು.<br>• ಮೇಲಾಧಿಕಾರಿಗಳಿಂದ ಸೂಚಿಸಲ್ಪಡುವ ಇತರೆ ಕರ್ತವ್ಯಗಳನ್ನು ನಿರ್ವಹಿಸುವುದು. |
| ಇ) | ಜಿಲ್ಲಾ ಮತ್ತು ತಾಲ್ಲೂಕು ಮಟ್ಟದಲ್ಲಿನ ಆಯುಷ್ ಆಸ್ಪತ್ರೆಗಳಲ್ಲಿ ತಜ್ಞ ವೈದ್ಯರ ಹುದ್ದೆಗಳನ್ನು ಸೃಜನೆ ಮಾಡಿ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು: ಕ್ರಮ ಕೈಗೊಳ್ಳದಿದಲ್ಲಿ ಯಾವ ಕಾಲಮಿತಿಯಲ್ಲಿ ಕೈಗೊಳ್ಳಲಾಗುವುದು? | ಸದರಿ ವೈದ್ಯರುಗಳನ್ನು ಸರ್ಕಾರಿ ಸೇವೆಯಲ್ಲಿ ಖಾಯಂಗೊಳಿಸಲು ನಿಯಮಗಳಲ್ಲಿ ಅವಕಾಶವಿರುವುದಿಲ್ಲ. |

**ಸಂಖ್ಯೆ: ಆಕುಕ 403 ಪಿಐಎಂ 2022**

(ಡಾ : ಕೆ.ಸುಧಾಕರ್)
ಆರೋಗ್ಯ ಮತ್ತು ಕುಟುಂಬ ಕಲ್ಯಾಣ
ಹಾಗೂ ವೈದ್ಯಕೀಯ ಶಿಕ್ಷಣ ಸಚಿವರು